::ಬೆಂಗಳೂರು ನಗರ ಜಿಲ್ಲಾ ಪಂಚಾಯತ್::

ಉಪನಿರ್ದೇಶಕರ ಕಛೇರಿ, ಸಾರ್ವಜನಿಕಶಿಕ್ಷಣ ಇಲಾಖೆ, ನಗರದಕ್ಷಿಣ ಜಿಲ್ಲೆ, ಕಲಾಸಿಪಾಳ್ಯ, ಬೆಂಗಳೂರು-560002.

ದಿನಾಂಕ: 30/03/2015

ಸಂಖ್ಯೆ: ಆ6/ಕಿ.ಪ್ರಾ.ಶಾನೋಂಅನು/100ಎ/2015-16

<u>ನಮೂನೆ-2</u>

[(ನಿಯಮ 3 ರ ಉಪ-ನಿಯಮ 5 (ಬಿ)]

ಪ್ರಮಾಣ ಪತ್ರದ ಸಂಖ್ಯೆ:58/2016-16

ಸಂಪಿದ್ ಹೊರಮಾವು ಎಜುಕೇಷನಲ್ ಟ್ರಸ್ಟ್ (ರಿ) ನಂ.5, 20ನೇ ಅಡ್ಡರಸ್ತೆ, 7ನೇ ಮುಖ್ಯ ರಸ್ತೆ, ಬಿ.ಟಿ.ಎಂ.2ನೇ ಹಂತ, ಎನ್.ಎಸ್.ಪಾಳ್ಯ, ಬೆಂಗಳೂರು-76 ಈ ಗವರ್ನಿಂಗ್ ಕೌನ್ಸಿಲ್‌ಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ ಸಂಖ್ಯೆ: 01 ರ 1995) ಸೆಕ್ಷನ್ 31 ರಂತೆ ಈ ದಿನ ಅಂದರೆ ದಿನಾಂಕ: 30-03-2015 (ಮೂವತ್ತು-ಮಾರ್ಚ್-ಎರಡು ಸಾವಿರದ ಹದಿನೈದು) ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣಸಂಸ್ಥೆಯನ್ನು ಶಾಶ್ವತ ಅನುದಾನವಿಲ್ಲದೇ ಕನ್ನಡ ಮಾಧ್ಯಮದಲ್ಲಿ ನಡೆಸಲು ಅನುಮತಿ ನೀಡಿ ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಿದೆ.

| | | |
|---|---|---|
| 01. | ಕ್ರಮ ಸಂಖ್ಯೆ | 58/2015-16 |
| 02. | ಶಾಲೆಯ ಹೆಸರು/ವಿಳಾಸ | ಮೌಂಟ್ ಆಟೇರ ರಿಪ ಕ.ಕಿ.ಪ್ರಾ.ಶಾಲೆ, ನಂ45 ಎಂ.ಆರ್.ರಸ್ತೆ, ಕಲ್ಕೆರೆ, ಹೊರಮಾವು ಅಂಚೆ, ಬೆಂಗಳೂರು-43 |
| 03. | ಅನುಮತಿ ನೀಡಿದ ತರಗತಿ | 1 ರಿಂದ 5 ನೇ ತರಗತಿವರೆಗೆ |
| 04. | ಪ್ರಾರಂಭಿಸಬೇಕಾದ ತರಗತಿಗಳು ಹಾಗೂ ಶೈಕ್ಷಣಿಕ ವರ್ಷ | 1 ರಿಂದ 5 ನೇ ತರಗತಿವರೆಗೆ<br>2015-16ನೇ ಸಾಲಿನಿಂದ |
| 05. | ಅನುಮತಿ ನೀಡಿದ ಮಾಧ್ಯಮ | ಕನ್ನಡ ಮಾಧ್ಯಮ ಶಾಶ್ವತ ಅನುದಾನ ರಹಿತವಾಗಿ |
| 06. | ಶುಲ್ಕ ಪಾವತಿಸಿದ ವಿವರ | ಡಿಡಿ ನಂ.009489/009490 ದಿನಾಂಕ: 26-11-2014<br>ರೂ.35,000/- (ರೂ. ಮೂವತ್ತೈದು ಸಾವಿರ ಗಳು ಮಾತ್ರ).<br>ಐ.ಡಿ.ಬಿ.ಐ ಬ್ಯಾಂಕ್ |
| 07. | ಶಿಫಾರಸ್ಸು ಮಾಡಿದ ಅಧಿಕಾರಿಗಳ ಹೆಸರು/ ಪದನಾಮ | ಶ್ರೀ ರಾಘವೇಂದ್ರಸ್ವಾಮಿ .ವಿಷಯ ಪರಿವೀಕ್ಷಕರು, ಸಾ.ಶಿ.ಇ, ಬೆಂಗಳೂರು ದಕ್ಷಿಣ ಜಿಲ್ಲೆ. |

ಸರ್ಕಾರಿ ಆದೇಶ ಸಂಖ್ಯೆ: ಇಡಿ125/ಪಿ.ಜಿ.ಸಿ.2002, ಬೆಂಗಳೂರು ದಿ: 10-06-2003ರನ್ವಯ, ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ: 58/2015 ಪುಟ ಸಂಖ್ಯೆ: 36-37 ಸಂಪುಟ 01 ರಲ್ಲಿ ಈ ಕಛೇರಿಯಲ್ಲಿ ಶೈಕ್ಷಣಿಕ ಸಂಸ್ಥೆಗಳ ನೊಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

ಈ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ.

1. ಈ ನೊಂದಾವಣೆಯು ನಿಯಮ 3(5)(4) ಕ್ಕೆ ಒಳಪಟ್ಟಿರುತ್ತದೆ.

2.ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4(4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

3.ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ ಪಾಠ-ಪೀಠೋಪಕರಣಗಳು ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

5. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿಯೇ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರ್ಕಾರ/ಇಲಾಖೆಯ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸತಕ್ಕದ್ದಲ್ಲ.

6.ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದ್ದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು.

7.ಇಲಾಖೆ ಹಾಗೂ ಸರ್ಕಾರ ನಿಗಧಿಪಡಿಸಿದ ಪಠ್ಯ ಮತ್ತು ಪುಸ್ತಕ ಪರೀಕ್ಷಾ ಕ್ರಮ ಇತ್ಯಾದಿ ತಪ್ಪದೇ ಅಳವಡಿಸತಕ್ಕದ್ದು.

8. ಶಾಲೆಯನ್ನು ನೊಂದಣಿ ಮಾಡಿದ ಮೂರು ತಿಂಗಳೊಳಗೆ ಸಂಬಂಧಿಸಿದ ಅಧಿಕಾರಿಗಳಿಂದ ಮಾನ್ಯತೆ ನವೀಕರಿಸಿಕೊಳ್ಳುವುದು.

9. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು.

10.ಶಾಲೆಗೆ ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು ಮತ್ತು ಶಿಕ್ಷಕರುಗಳಿಗೆ ಹಾಗೂ ಸಿಬ್ಬಂದಿಗಳಿಗೆ ಸೇವಾ ಭದ್ರತೆ ಒದಗಿಸುವುದು ಕಡ್ಡಾಯವಾಗಿರುತ್ತದೆ.

11. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

12. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒದಗಿಸತಕ್ಕದ್ದು, ಇಲ್ಲದಿದ್ದಲ್ಲಿ ನೊಂದಣಿಯನ್ನು ರದ್ದುಗೊಳಿಸಲಾಗುವುದು.

13. ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮದಂತೆ ಪಾಲಿಸತಕ್ಕದ್ದು.

14.ಶಾಲೆಯನ್ನು 1 ರಿಂದ 5 ನೇ ತರಗತಿಯವರೆಗೆ ಇತ್ತೀಚಿನ ಭಾಷಾ ನೀತಿಯಂತೆ ಕನ್ನಡ ಮಾಧ್ಯಮದಲ್ಲಿ/ಮಾತೃ ಭಾಷೆಯಲ್ಲಿ ನಡೆಸುವುದಾಗಿ ನೋಟರಿಯವರಿಂದ ದೃಢೀಕರಿಸಿ ಪ್ರಮಾಣ ಪತ್ರವನ್ನು ನೀಡುವುದು.

15.ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೊಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಂತಾನೇ ರದ್ದಾಗುವುದು.

16.ಶಾಲೆಯು ಯಾವುದೇ ಸಂದರ್ಭದಲ್ಲಿ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.

17. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8 ರ ಅಡಿಯಲ್ಲಿ ಉಪಬಂಧ 36-37 ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳು ರೆಕಗ್ನಿಷನ್ ಹಾಗೂ ಪ್ರಾವಿಷನಲ್ ರೆಕಗ್ನಿಷನ್ ವ್ಯಾಪ್ತಿಗೆ ಬರುವುದು.

18. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು) ನಿಯಮ 1999 ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು. ಶಿಕ್ಷಕರುಗಳಿಗೆ ಸೇವಾ ವಹಿ ಪ್ರಾರಂಭಿಸಿ, ಬ್ಯಾಂಕ್ ಮೂಲಕ ವೇತನ ನೀಡುವುದು ಹಾಗೂ ಸೇವಾ ಭದ್ರತೆ ಕಲ್ಪಿಸುವುದು ಆಡಳಿತ ಮಂಡಳಿಯ ಜವಾಬ್ದಾರಿಯಾಗಿರುತ್ತದೆ.

19.ಶಾಲೆಯ ಸ್ಥಿರನಿಧಿಯನ್ನು ನಿಯಮಾನುಸಾರ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಯವರ ಜಂಟಿ ಖಾತೆಯಲ್ಲಿಡಬೇಕು.

20.ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಹಾಗೂ ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು.

21. ಶಾಲೆಯ ಕಟ್ಟಡ ಹಾಗೂ ಆವರಣವನ್ನು ಬೆಂಕಿ, ಅಪಘಾತ, ವಿದ್ಯುತ್ ಅಪಘಾತ ಮತ್ತಿತರ ಅವಘಡಗಳಿಂದ ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷಕರಿಗೆ ಮತ್ತು ಸಿಬ್ಬಂದಿಗೆ ಸುರಕ್ಷಿತವಾಗಿರುವಂತೆ ವ್ಯವಸ್ಥೆ ಮಾಡುವುದು. ಕಟ್ಟಡ ಸುರಕ್ಷತೆ ಬಗ್ಗೆ ಸರ್ವೋಚ್ಛ ನ್ಯಾಯಾಲಯದ ಪ್ರಕರಣ ಸಂಖ್ಯೆ: 483/2004, ದಿ: 13-4-2009ರಲ್ಲಿ ನೀಡಿರುವ ನಿರ್ದೇಶನವನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

22. ಪ್ರತಿ ವರ್ಷ ಶಾಲೆಯ ದಾಖಲಾತಿಯನ್ನು ಏಪ್ರಿಲ್ 10 ರ ನಂತರ ಪ್ರಾರಂಭಿಸಬೇಕು. ಸರ್ಕಾರದ ಮೀಸಲಾತಿ ನಿಯಮವನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು ಹಾಗೂ ಸ್ಥಳೀಯರಿಗೆ ದಾಖಲಾತಿಯಲ್ಲಿ ಆದ್ಯತೆ ನೀಡತಕ್ಕದ್ದು.

23.ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ 2009 ಅಧಿನಿಯಮದ ಪ್ರಕಾರ ಮತ್ತು ನಿಯಮಾನುಸಾರ ದಾಖಲಾತಿ ಮಾಡಿಕೊಳ್ಳತಕ್ಕದ್ದು.

(ಕೆ.ಪದ್ಮಾವತಿ)
ಉಪ ನಿರ್ದೇಶಕರು(ಆಡಳಿತ)
ಬೆಂಗಳೂರು ದಕ್ಷಿಣ ಜಿಲ್ಲೆ

ದಿನಾಂಕ:30/03/2015
ಸ್ಥಳ: ಬೆಂಗಳೂರು

ಪ್ರತಿ:

1. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ದಕ್ಷಿಣ ವಲಯ-4, ಕೆ.ಆರ್.ಪುರಂ, ಬೆಂಗಳೂರು.
2. ಕಾರ್ಯದರ್ಶಿಗಳು, ಸಂಸಿದ್ ಹೊರಮಾವು ಎಜುಕೇಷನಲ್ ಟ್ರಸ್ಟ್ (ರಿ) ನಂ.5, 20ನೇ ಅಡ್ಡರಸ್ತೆ, 7ನೇ ಮುಖ್ಯ ರಸ್ತೆ, ಬಿ.ಟಿ.ಎಂ.2ನೇ ಹಂತ, ಎನ್.ಎಸ್.ಪಾಳ್ಯ, ಬೆಂಗಳೂರು-76
3. ಕಛೇರಿ ಪ್ರತಿ.

ಉಪ ನಿರ್ದೇಶಕರ ಕಚೇರಿ ಬೆಂಗಳೂರು ದಕ್ಷಿಣ ಜಿಲ್ಲೆ ಕಲಾಸಿಪಾಳ್ಯ ಬೆಂಗಳೂರು-02 ಸಾರ್ವಜನಿಕ ಶಿಕ್ಷಣ ಇಲಾಖೆ

ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ,

ಸಂಖ್ಯೆ: ಬಿ6/ಅ-(ಪ್ರಾ) ಶಾ.ನೋಂ ಅನು 48 2018-19

ಮಂಜೂರಾತಿ ನೀಡಿದ ಕಛೇರಿ ವಿಳಾಸ: ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ದಕ್ಷಿಣ ಜಿಲ್ಲೆ ಕಲಾಸಿಪಾಳ್ಯ, ಬೆಂಗಳೂರು-560 002

ದಿನಾಂಕ: **06-Aug-2018**

[ನಿಯಮ 3 ಉಪನಿಯಮ 5(ಬಿ)]

ಪ್ರಮಾಣ ಪತ್ರ ಸಂಖ್ಯೆ: **5795/2018-19**

**MOUNT LITERA ZEE SCHOOL ( 582/2, 583/3, KALKERE VILLAGE, KR PURAM, HOBLI, BANGALORE-560076 )**

ಇವರ ಗೌವರ್ನಿಂಗ್ ಕೌನ್ಸಿಲ್ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರಾಥಮಿಕ ಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ **1983** [ಕರ್ನಾಟಕ ಆಕ್ಟ್ **1995**] ಸಕ್ಷನ್ **31**ರಂತೆ ಈ ಕೆಳಕಂಡ **TO PROVIDE QUALITY EDUCATION...** ಹಿರಿಯ ಪ್ರಾಥಮಿಕ **(6** ರಿಂದ **8) (Upgradation from 6th to 8th)** ಪ್ರಾರಂಭಿಸಲು ಮಂಜೂರಾತಿ ನೀಡಿ ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

1. ಅರ್ಜಿ ಸಂಖ್ಯೆ : **181326**
2. ಕ್ರಮ ಸಂಖ್ಯೆ : **5795**
3. ಶಾಲೆಯ ಹೆಸರು ಮತ್ತು ವಿಳಾಸ : **MOUNT LITERA ZEE SCHOOL ( 582/2, 583/3, KALKERE VILLAGE, KR PURAM, HOBLI, BANGALORE-560076 )**
4. ಅನುಮತಿ ನೀಡಿದ ತರಗತಿ : **Upgradation from 6th to 8th**
5. ಶೈಕ್ಷಣಿಕ ವರ್ಷ : **2018-19**

6 ಅನುಮತಿ ನೀಡಿದ ಮಾಧ್ಯಮ : **English**

ಸದರಿ ಶಿಕ್ಷಣ ಸಂಸ್ಥೆಯನ್ನು ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ. ಕ್ರಮ ಸಂಖ್ಯೆ / ಪುಟ ಸಂಖ್ಯೆ / ವಾಲ್ಯೂಂ ಸಂಖ್ಯೆ : 189 / 104 / 105/01 2018-19

ಷರತ್ತುಗಳು

1. ಈ ನೋಂದಾವಣಿಯು ನಿಯಮ **3[5][4]**ಕ್ಕೆ ಒಳಪಟ್ಟಿರುತ್ತದೆ.
2. ಗೌವರ್ನಿಂಗ್ ಕೌನ್ಸಿಲ್ ಇವರು ನಿಯಮ **4[4]**ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
5. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ **1983** [ಕರ್ನಾಟಕ ಆಕ್ಟ್ ಸಂಖ್ಯೆ:**1:96**] ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

ಮುಂದುವರೆದಿದೆ...

6. ಈ ಪ್ರೌಢಶಾಲಾ ನೊಂದಾವಣಿಯಂತೆ ಸರ್ಕಾರಿ ಅಧಿಸೂಚನೆ ಸಂ: ಇಡಿ:175:ಪಿಎಂಸಿ:95, ದಿ:07-09-1998 ಮತ್ತು ದಿ:29-12-1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 10-00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

7. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು] ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

8. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

9. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.

10. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36-39ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳ ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

11. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

12. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

13. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.

14. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿ ಮಾಹಿತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.

15. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

16. ಪ್ರಥಮ ಮಾನ್ಯತೆಗಾಗಿ ಉಪನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸುವುದು. ಉಪನಿರ್ದೇಶಕರು ಶಿಕ್ಷಣ ಕಾಯ್ದೆ ಮತ್ತು ಸರ್ಕಾರದ ಆದೇಶ ದಿನಾಂಕ: 30-09-2007ರ ಅನುಬಂಧ-3ರ ಚೆಕ್ ಲಿಸ್ಟ್ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ನೀಡುವುದು. ನಿಗದಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ.

17. ಶಾಲೆಯ ಕಟ್ಟಡ ಸುರಕ್ಷತೆಯ ಬಗ್ಗೆ ಬೆಂಕಿ, ಬಿರುಗಾಳಿ, ವಿದ್ಯುತ್ ಅಪಘಾತ ಮುಂತಾದ ಅವಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು. ಶಾಲಾ ಆವರಣದ 100 ಗಜಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದೆ ಎಂದು ಶಾಲಾ ಮುಂಭಾಗದಲ್ಲಿ ಪ್ರಕಟಣೆ ನೀಡುವುದು.

18. ಶಾಲಾ ಆಡಳಿತ ಮಂಡಳಿ ಯಾವುದೇ ತಪ್ಪು ಮಾಹಿತಿಗಳನ್ನು ನೀಡಿದ್ದಲ್ಲಿ ನೋಂದಣಿಯನ್ನು ರದ್ದುಪಡಿಸುವ ಅಧಿಕಾರ ಇಲಾಖೆ ಕಾಯ್ದಿರಿಸಿಕೊಂಡಿದೆ.

19. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 369 ಪಿ.ಜಿ.ಸಿ 2014, ದಿನಾಂಕ: 11.11.2014ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 14.11.2014ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

20. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 709 ಪಿ.ಜಿ.ಸಿ 2017, ದಿನಾಂಕ: 07.03.2018ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 26.03.2018ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

ಉಪ ನಿರ್ದೇಶಕರು (ಆಡಳಿತ)

ಉಪನಿರ್ದೇಶಕರು,
ಸಾರ್ವಜನಿಕ ಶಿಕ್ಷಣ ಇಲಾಖೆ,

1. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದ. ವಲಯ-4 ಕೆ.ಆರ್. ಪುರಂ. ಬೆಂಗಳೂರು
2. ಕಾರ್ಯದರ್ಶಿಗಳು, **MOUNT LITERA ZEE SCHOOL (582/2, 583/3, KALKERE VILLAGE, KR PURAM, HOBLI, BANGALORE-560076)**
3. ಕಛೇರಿ ಪ್ರತಿ.